# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 314 |
| ಮಾನ್ಯ ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 15/02/2024 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೀಡುತ್ತಿರುವ ಪಿಂಚಣಿ ಸೌಲಭ್ಯ ಪಡೆಯಲು ನೋಂದಾಯಿತರ ಕಾರ್ಮಿಕರ ಮಂಡಳಿಯಲ್ಲಿ ಕನಿಷ್ಠ ಮೂರು ವರ್ಷಗಳ ಸದಸ್ಯತ್ವದೊಂದಿಗೆ 60 ವರ್ಷ ಪೂರ್ಣಗೊಂಡ ಆರು ತಿಂಗಳೊಳಗೆ ಪಿಂಚಣಿ ಕೋರಿ ನಿಗದಿತ ದಾಖಲೆಗಳೊಂದಿಗೆ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವುದನ್ನು ಕಡ್ಡಾಯಗೊಳಿಸಿರುವುದರಿಂದ ವಯೋಮಾನ ಮೀರಿರುವ ಹಲವಾರು ಅರ್ಹ ಕಾರ್ಮಿಕರು ವಂಚಿತರಾಗಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ರಾಜ್ಯದಲ್ಲಿ ಹಲವಾರು ಜನರು 60 ವರ್ಷ ಪೂರ್ಣಗೊಂಡ ಆರು ತಿಂಗಳೊಳಗಾಗಿ ಪಿಂಚಣಿ ಕೋರಿ ಅರ್ಜಿ ಸಲ್ಲಿಸಲು ಆಗದ ಪ್ರಕರಣಗಳಿಗೆ ನ್ಯಾಯ ಒದಗಿಸಲು ಸರ್ಕಾರ ಕೈಗೊಂಡ ಕ್ರಮವೇನು | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ಪಿಂಚಣಿ ಸೌಲಭ್ಯವನ್ನು ಪಡೆಯಲು ಕಟ್ಟಡ ಮತ್ತು ಇತರೆ ನಿರ್ಮಾಣ (ಕಾರ್ಮಿಕರ ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮ, 2006 ರ ನಿಯಮ 39(1)(ಎ) ಯನ್ವಯ 60 ವರ್ಷ ಪೂರ್ಣಗೊಳಿಸಿರುವ ಅರ್ಹ ಫಲಾನುಭವಿಗಳಿಗೆ ನಿಯಮ 49-ಸಿ ರಲ್ಲಿ 06 ತಿಂಗಳ ಕಾಲಾವಧಿಯನ್ನು ಅರ್ಜಿ ಸಲ್ಲಿಕೆಗಾಗಿ ನಿಗಧಿಪಡಿಸಲಾಗಿತ್ತು. ಫಲಾನುಭವಿಗಳು ಈ ಸೌಲಭ್ಯದಿಂದ ವಂಚಿತರಾಗಬಾರದು ಎನ್ನುವ ಕಾರಣಕ್ಕೆ ಪ್ರಸ್ತುತ 06 ತಿಂಗಳ ಕಾಲಮಿತಿಯನ್ನು 01 ವರ್ಷಕ್ಕೆ ವಿಸ್ತರಿಸಿ, ಈಗಾಗಲೇ ದಿನಾಂಕ: 12.01.2024 ರಂದು ಸರ್ಕಾರದಿಂದ ಅಧಿಸೂಚನೆಯನ್ನು ಹೊರಡಿಸಲಾಗಿದೆ. |
| ಇ) | 60 ವರ್ಷ ಪೂರ್ಣಗೊಂಡ 6 ತಿಂಗಳೊಳಗಾಗಿ ಅರ್ಜಿ ಸಲ್ಲಿಸದೆ ನಂತರದ ದಿನಗಳಲ್ಲಿ ಅರ್ಜಿ ಸಲ್ಲಿಸಿದ ಕಟ್ಟಡ ಕಾರ್ಮಿಕರಿಗೆ ಪಿಂಚಣಿ ಸೌಲಭ್ಯ ದೊರೆಯುವಂತೆ ಮಾಡಲು ನಿಯಮಗಳಿಗೆ ಸೂಕ್ತ ತಿದ್ದುಪಡಿಗಳನ್ನು ತರಲಾಗಿದೆಯೇ? | |

**ಕಾಇ 108 ಎಲ್ ಇಟಿ 2024**

(ಸಂತೋಷ್ ಎಸ್. ಲಾಡ್)
ಕಾರ್ಮಿಕ ಸಚಿವರು